ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ಇಂಡಿ.
ಇವರ ನ್ಯಾಯಾಲಯದಲ್ಲಿ.

ಸಿ.ಸಿ.ನಂ. : 302/2019
ಪ್ರಾಸಾ : 07
ಚಾ.ಸಾ.: 08

| | | |
|---|---|---|
| ಸಾಕ್ಷಿದಾರರ ಹೆಸರು | : | ಡಾ.ಮುನೀರ ಅಹ್ಮದ ಮಹೆಬೂಬಸಾಬ ಬೇಕಿನಾಳ |
| ವಯಸ್ಸು | : | 60 ವರ್ಷ |
| ಉದ್ಯೋಗ | : | ಮುಖ್ಯ ವೈದ್ಯಾಧಿಕಾರಿಗಳು, ಅಲ್ ಅಮೀನ್ ಮೆಡಿಕಲ್ ಕಾಲೇಜು, ವಿಜಯಪುರ |
| ವಾಸ ಸ್ಥಳ | : | ವಿಜಯಪುರ |

(ಈ ದಿವಸ ದಿನಾಂಕ 11.01.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು)

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ:

1) ನಾನು 2011 ರಿಂದ ವಿಜಯಪುರದ ಅಲ್ ಅಮೀನ್ ಮೆಡಿಕಲ್ ಕಾಲೇಜಿನಲ್ಲಿ ಮುಖ್ಯ ವೈದ್ಯಾಧಿಕಾರಿಯಾಗಿ ಕೆಲಸ ಮಾಡುತ್ತಿದ್ದೇನೆ.

2) ದಿ : 27-03-2018 ರಂದು ಮಧ್ಯಾಹ್ನ 2-30 ಗಂಟೆ ಸುಮಾರಿಗೆ ಚಾಸಾ-4 ರವರು ಹಲ್ಲೆಯ ಹಿನ್ನಲೆಯಲ್ಲಿ ಚಿಕಿತ್ಸೆಗೆ ದಾಖಲಾಗಿದ್ದು, ನಾನು ಅವರನ್ನು ಪರೀಕ್ಷಿಸಿದಾಗ ಅವರ ತಲೆಯ ಭಾಗದಲ್ಲಿ ಊತದ ಗಾಯ ಕಂಡು ಬಂದಿರುತ್ತದೆ. ನಾನು ಸರ್ಜರಿ ವಿಭಾಗದ ವೈದ್ಯರನ್ನು ಕರೆದು ಎಕ್ಸರೆ ಮತ್ತು ಸಿ.ಟಿ. ಸ್ಕ್ಯಾನ್ ಮಾಡಿಸಿದ್ದು, ಯಾವುದೇ ಗಾಯಗಳು ಕಂಡು ಬಂದಿರುವುದಿಲ್ಲ. ಆದರೂ ಸಹ ಚಾಸಾ-4 ರವರನ್ನು 3 ದಿನಗಳ ಕಾಲ ಒಳರೋಗಿಯಾಗಿ ಚಿಕಿತ್ಸೆ ನೀಡಲಾಗಿರುತ್ತದೆ.

3) ನನ್ನ ಅಭಿಪ್ರಾಯದಲ್ಲಿ ಸದರಿ ಗಾಯಗಳು ಸಾಮಾನ್ಯ ಸ್ವರೂಪದ ಗಾಯಗಳಾಗಿರುತ್ತವೆ. ಈ ಬಗ್ಗೆ ನಾನು ತನಿಖಾಧಿಕಾರಿಗಳಿಗೆ ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ. ಸಾಕ್ಷಿಯು ಗಾಯದ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–3 ಎಂದು, ಸಾಕ್ಷಿಯ ಸಹಿಯನ್ನು ನಿಪಿ–3(ಎ) ಎಂದು ಗುರುತಿಸಲಾಯಿತು.

4) ನಿಪಿ–3 ರಲ್ಲಿರುವ ಗಾಯಗಳು ನಾನು ಚಿಕಿತ್ಸೆ ನೀಡುವ ಮುಂಚಿನ 24 ಗಂಟೆಯೊಳಗಿನ ಗಾಯಗಳಾಗಿರುತ್ತವೆ. ಕಲ್ಲಿನಿಂದ ಹಲ್ಲೆ ಮಾಡಿದಾಗ ನಿಪಿ–3 ರಲ್ಲಿ ತಿಳಿಸಿರುವ ಗಾಯಗಳಾಗುವ ಸಾಧ್ಯತೆಗಳು ಇರುತ್ತವೆ.

<u>ಪಾಟೀ ಸವಾಲು : ಶ್ರೀ. ಪಿ.ಡಿ.ಎಲ್. ವಕೀಲರಿಂದ : ಆರೋಪಿತರ ಪರವಾಗಿ:</u>

1) ದ್ವಿಚಕ್ರ ವಾಹನದಲ್ಲಿ ಆಯತ ತಪ್ಪಿ ಬಿದ್ದಾಗಲೂ ಸಹ ನಿಪಿ–3 ರಲ್ಲಿ ತಿಳಿಸಿರುವ ಗಾಯಗಳಾಗುವ ಸಾಧ್ಯತೆಗಳು ಇರುತ್ತವೆ ಎಂದರೆ ಸರಿ. ನಾನು ಪಿರ್ಯಾದುದಾರರಿಗೆ ಸಹಾಯ ಮಾಡಲು ಸುಳ್ಳು ಗಾಯದ ಪ್ರಮಾಣ ಪತ್ರ ನೀಡಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ : ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಇದೆ

(ದೇವರಾಜು ಹೆಚ್.ಆರ್.)
ಹೆಚ್ಚುವರಿ ದಿವಾಣಿ ನ್ಯಾಯಾಧೀಶರು
ವ ಜೆ.ಎಂ.ಎಫ್.ಸಿ., ಇಂಡಿ.